# Akashvani : Bangalore
# Regional Bulletin In Kannada
# 14.05.2024 / 18.40 hrs

## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಅಪಹರಣ ಪ್ರಕರಣದಲ್ಲಿ ಷರತ್ತುಬದ್ಧ ಜಾಮೀನು ಪಡೆದ ಮಾಜಿ ಸಚಿವ ಹೆಚ್.ಡಿ. ರೇವಣ್ಣ ಜೈಲಿನಿಂದ ಬಿಡುಗಡೆ

೨. ಕಾಂಗ್ರೆಸ್ ಪಕ್ಷದಲ್ಲಿ ಒಳಜಗಳವಿಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ರಾಜ್ಯಾದ್ಯಂತ ಭಗೀರಥ ಮಹರ್ಷಿ ಜಯಂತಿ ; ವಿವಿಧ ಗಣ್ಯರಿಂದ ನಮನ

೪. ಹಳೆ ಮೈಸೂರು ಭಾಗದಲ್ಲಿ ಧಾರಾಕಾರ ಮಳೆ ; ಇಳೆಗೆ ತಂಪೆರೆದ ವರುಣ

೫. ಐಪಿಎಲ್ ಕ್ರಿಕೆಟ್: ಇಂದು ಡೆಲ್ಲಿ ಕ್ಯಾಪಿಟಲ್ಸ್-ಲಖನೌ ಸೂಪರ್ ಜೈಂಟ್ಸ್ ಹಣಾಹಣಿ

<><*<><>*><>

ಮಹಿಳೆಯರ ಮೇಲಿನ ದೌರ್ಜನ್ಯ ಮತ್ತು ಸಂತ್ರಸ್ತೆಯನ್ನು ಅಪಹರಿಸಿದ ಆರೋಪದ ಮೇಲೆ ಜೈಲು ಪಾಲಾಗಿದ್ದ ಮಾಜಿ ಸಚಿವ ಹೆಚ್.ಡಿ. ರೇವಣ್ಣ ಅವರಿಗೆ ಜನಪ್ರತಿನಿಧಿಗಳ ನ್ಯಾಯಾಲಯ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದ್ದು, ಇಂದು ಅವರು ಪರಪ್ಪನ ಅಗ್ರಹಾರ ಜೈಲಿನಿಂದ ಬಿಡುಗಡೆಯಾಗಿದ್ದಾರೆ. ಜೈಲಿಂದ ಹೊರಬಂದ ಬಳಿಕ ಹೆಚ್.ಡಿ. ರೇವಣ್ಣ ಅವರು, ತಮ್ಮ ತಂದೆ ಹೆಚ್.ಡಿ. ದೇವೇಗೌಡರ ಬೆಂಗಳೂರಿನ ನಿವಾಸಕ್ಕೆ ತೆರಳಿ ಆಶೀರ್ವಾದ ಪಡೆದರು. ಪ್ರಕರಣದ ಕುರಿತು ಪ್ರತಿಕ್ರಿಯೆ ನೀಡಿರುವ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ, ತಮ್ಮ ಸಹೋದರ ಹೆಚ್.ಡಿ. ರೇವಣ್ಣ ಅವರ ಬಂಧನ ರಾಜಕೀಯ ಪ್ರೇರಿತ. ದೇವೇಗೌಡರ ಕುಟುಂಬಕ್ಕೆ ಕಳಂಕ ತರಲು ಈ ರೀತಿ ಮಾಡಿದ್ದಾರೆ. ಇದರ ಹಿಂದೆ ಮಹಾ ನಾಯಕರಿದ್ದಾರೆ ಎಂದು ಆರೋಪಿಸಿದ್ದಾರೆ. ಈ ಪ್ರಕರಣದಲ್ಲಿ ವಕೀಲರಾದ ದೇವರಾಜೇಗೌಡರನ್ನು ಬಂಧಿಸಿದ್ದು ಏಕೆ ಎಂದು ಪ್ರಶ್ನಿಸಿದ ಅವರು, ಇದು ರಾಜ್ಯದಲ್ಲಿ ನಡೆದಿರುವ ಅತ್ಯಂತ ಹೀನಾಯ ಘಟನೆ. ರೇವಣ್ಣ ಅವರಿಗೆ ಜಾಮೀನು ಸಿಕ್ಕಿದೆ ಎಂದು ಸಂಭ್ರಮ ಪಡುವುದು ಬೇಡ. ಕಾರ್ಯಕರ್ತರು ಸಂಭ್ರಮಿಸುವ ಸಮಯ ಇದಲ್ಲ ಎಂದು ಹೇಳಿದ್ದಾರೆ.

<><*<><>*><>

ಕಾಂಗ್ರೆಸ್ ಪಕ್ಷದೊಳಗೆ ಒಳ ಜಗಳ ಇದ್ದಲ್ಲಿ ಲೋಕಸಭಾ ಚುನಾವಣೆಯಲ್ಲಿ ಒಗ್ಗಟ್ಟಿನಿಂದ ಕೆಲಸ ಮಾಡಲು ಸಾಧ್ಯವಾಗುತ್ತಿರಲಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಮೈಸೂರಿನ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದಲ್ಲಿ ಜಗಳವಾಗಿ ಸರ್ಕಾರ ಪತನವಾಗಲಿದೆ ಎಂದು ಬಿಜೆಪಿ ನಾಯಕರು ರಾಜಕೀಯ ಪ್ರೇರಿತವಾಗಿ ಹೇಳಿಕೆ ನೀಡುತ್ತಿದ್ದಾರೆ ಎಂದು ದೂರಿದರು. ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ರಾಜ್ಯ ಸರ್ಕಾರ ಪತನದ ಬಗ್ಗೆ ಮಾತನಾಡುತ್ತಿದ್ದಾರೆ. ಅವರು ಮೊದಲು ತಮ್ಮ ಸರ್ಕಾರವನ್ನು ಉಳಿಸಿಕೊಳ್ಳಲಿ ಎಂದು ಸಿದ್ದರಾಮಯ್ಯ ಹೇಳಿದರು. ಲೋಕಸಭೆ ಚುನಾವಣೆಯನ್ನು ಕಾಂಗ್ರೆಸ್ ಪಕ್ಷ ಗಂಭೀರವಾಗಿ ಪರಿಗಣಿಸಿದೆ. ಹೀಗಾಗಿ ಅಭ್ಯರ್ಥಿಗಳನ್ನು ಆರು ತಿಂಗಳು ಮುಂಚಿತವಾಗಿಯೇ ಆಯ್ಕೆ ಮಾಡಲಾಗಿತ್ತು. ಲೋಕಸಭೆ ಚುನಾವಣೆಯ ಫಲಿತಾಂಶದ ಮೇಲೆ ಬಿಜೆಪಿ-ಜೆಡಿಎಸ್ ಮೈತ್ರಿ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.

ವಿಧಾನ ಪರಿಷತ್ ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರದ ಮತದಾರರು ರಾಜಕೀಯವಾಗಿ ಪ್ರಬುದ್ಧರಾಗಿದ್ದಾರೆ. ಕೇಂದ್ರ ಸರ್ಕಾರದ ಸಾಧನೆಗಳು ಹಾಗೂ ರಾಜ್ಯ ಸರ್ಕಾರದ ಸಾಧನೆಗಳ ಬಗ್ಗೆ ತುಲನೆ ಮಾಡುವ ಶಕ್ತಿ ಅವರಿಗಿದೆ ಎಂದರು.

<><*<><>*><>

ಉತ್ತರ ಕನ್ನಡ ಜಿಲ್ಲಾ ಸಹಕಾರ ಬ್ಯಾಂಕಿಗೆ ೨೦೨೩-೨೪ ನೇ ಸಾಲಿನ ಭತ್ತ ಹಾಗೂ ಗೋವಿನ ಜೋಳದ ಬೆಳೆ ಹಾನಿ ವಿಮೆ ೪೧ ಕೋಟಿ ರೂಪಾಯಿ ಜಮೆ ಆಗಿದೆ ಎಂದು ಕೆ.ಡಿ.ಸಿ.ಸಿ ಬ್ಯಾಂಕ್ ಅಧ್ಯಕ್ಷ ಮತ್ತು ಶಾಸಕ ಶಿವರಾಮ ಹೆಬ್ಬಾರ್ ತಿಳಿಸಿದ್ದಾರೆ. ಕಳೆದ ಸಾಲಿನಲ್ಲಿ ಮುಂಗಾರು ಮಳೆ ಕೊರತೆಯಿಂದ ಭತ್ತ, ಗೋವಿನ ಜೋಳ ಬೆಳೆಗೆ ಹಾನಿಯಾಗಿ ರೈತ ಸಮುದಾಯಕ್ಕೆ ಗಾಯದ ಮೇಲೆ ಬರೆ ಎಳೆದಂತಾಗಿತ್ತು. ಈ ಬೆಳೆ ವಿಮೆ ಬಿಡುಗಡೆಯಿಂದಾಗಿ ಭತ್ತ, ಗೋವಿನ ಜೋಳ ಬೆಳೆದು ಜೀವನ ಸಾಗಿಸುತ್ತಿದ್ದ ಹಲವಾರು ರೈತರಿಗೆ ಆರ್ಥಿಕ ಶಕ್ತಿ ತುಂಬಲಿದೆ ಎಂದರು. ವಿಮಾ ಕಂಪನಿಯ ಮಾನದಂಡದ ಅನ್ವಯವಾಗಿ ಜಿಲ್ಲೆಯ ಭತ್ತ ಹಾಗೂ ಗೋವಿನ ಜೋಳ ಬೆಳೆದ ರೈತರಿಗೆ ಜಿಲ್ಲಾ ಸಹಕಾರಿ ಬ್ಯಾಂಕ್‌ನಿಂದ ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿ ರೈತರ ಖಾತೆಗೆ ಪರಿಹಾರದ ಮೊತ್ತ ವರ್ಗಾಯಿಸಲಾಗಿದೆ ಎಂದು ಶಿವರಾಮ ಹೆಬ್ಬಾರ್ ತಿಳಿಸಿದ್ದಾರೆ.

<><*<><>*><>

ರಾಜ್ಯದ ವಿವಿಧೆಡೆ ಇಂದು ಭಗೀರಥ ಜಯಂತಿಯನ್ನು ಆಚರಿಸಲಾಯಿತು. ಗಂಗೆಯನ್ನು ಧರೆಗೆ ತಂದ ಭಗೀರಥನನ್ನು ಸ್ಮರಿಸಲು ಪ್ರತಿ ವರ್ಷ ವಸಂತ ಋತುವಿನಲ್ಲಿ ವೈಶಾಖ ಮಾಸದ ಗಂಗಾ ಸಪ್ತಮಿಯಂದು ಮಹರ್ಷಿ ಭಗೀರಥ ಜಯಂತಿಯನ್ನು ಆಚರಿಸಲಾಗುತ್ತದೆ. ಮೈಸೂರು ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಮೈಸೂರಿನ ಕರ್ನಾಟಕ ಕಲಾ ಮಂದಿರದ ಆವರಣದಲ್ಲಿ ಆಯೋಜಿಸಿದ್ದ ಭಗೀರಥ ಮಹರ್ಷಿಗಳ

ಜಯಂತಿ ಮಹೋತ್ಸವಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಮಲ್ಲಿಕಾರ್ಜುನ್ ಸ್ವಾಮಿ ಚಾಲನೆ ನೀಡಿದ್ದಾರೆ. ಯಾದಗಿರಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಭಗೀರಥ ಮಹರ್ಷಿ ಜಯಂತಿ ಆಚರಿಸಲಾಯಿತು. ಕಠಿಣ ಮತ್ತು ಅವಿರತ ಪ್ರಯತ್ನದ ಮೂಲಕ ಜೀವನದಲ್ಲಿ ಉತ್ತಮ ಗುರಿ ಹೊಂದಲು ಸಾಧ್ಯ ಎನ್ನುವುದಕ್ಕೆ ಭಗೀರಥ ಮಹರ್ಷಿಗಳು ನಿದರ್ಶನವಾಗಿದ್ದಾರೆ. ಇವರ ಆದರ್ಶಗಳನ್ನು ಪ್ರತಿಯೊಬ್ಬರೂ ಪಾಲಿಸೋಣ ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ. ಬಿ.ಸುಶೀಲಾ ಅಭಿಪ್ರಾಯಪಟ್ಟರು. ಕೊಪ್ಪಳ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಭಗೀರಥ ಮಹರ್ಷಿ ಜಯಂತಿ ಆಚರಿಸಲಾಯಿತು. ಭಗೀರಥ ಮಹರ್ಷಿ ಭಾವಚಿತ್ರಕ್ಕೆ ಕೊಪ್ಪಳ ಜಿಲ್ಲಾಧಿಕಾರಿ ಸಾವಿತ್ರಿ ಬಿ. ಕಡಿ ಪುಷ್ಪ ನಮನ ಸಲ್ಲಿಸಿದರು. ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಹಮ್ಮಿಕೊಂಡಿದ್ದ ಭಗೀರಥ ಜಯಂತಿ ಕಾರ್ಯಕ್ರಮವನ್ನು ಚಿತ್ರದುರ್ಗ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಉದ್ಘಾಟಿಸಿದರು.

ರಾಮನಗರ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ ವತಿಯಿಂದ ಕನ್ನಡ ಸಂಸ್ಕೃತಿ ಇಲಾಖೆಯ ಸಹಾಯಕರ ನಿರ್ದೇಶಕರ ಕಚೇರಿಯಲ್ಲಿ ಭಗೀರಥ ಜಯಂತಿ ಆಚರಿಸಲಾಯಿತು.

**<><*<><>*><>**

ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಗೆ ಇಂದು ಕಾಂಗ್ರೆಸ್ ಅಭ್ಯರ್ಥಿಯಾಗಿ ಮರಿತಿಬ್ಬೆಗೌಡ ನಾಮಪತ್ರ ಸಲ್ಲಿಸಿದ್ದಾರೆ. ಮೈಸೂರಿನ ಪ್ರಾದೇಶಿಕ ಆಯುಕ್ತರ ಕಚೇರಿಗೆ ತೆರಳಿ ಚುನಾವಣಾಧಿಕಾರಿ ಡಾ. ಪ್ರಕಾಶ್ ಅವರಿಗೆ ಅಭ್ಯರ್ಥಿ ಮರಿತಿಬ್ಬೆಗೌಡ ಉಮೇದುವಾರಿಕೆ ಸಲ್ಲಿಸಿದ್ದಾರೆ. ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಡಾ. ಹೆಚ್.ಸಿ ಮಹದೇವಪ್ಪ, ಕೆ. ವೆಂಕಟೇಶ್, ಚಲುವರಾಯಸ್ವಾಮಿ, ಮಧು ಬಂಗಾರಪ್ಪ ಸೇರಿದಂತೆ ಪಕ್ಷದ ನಾಯಕರು ಉಪಸ್ಥಿತರಿದ್ದರು. ಸುದ್ದಿಗಾರರೊಂದಿಗೆ ಮಾತನಾಡಿದ ಮರಿತಿಬ್ಬೇಗೌಡ, ಈ ಭಾಗದ ಶಿಕ್ಷಕರು ಸದಾ ಆಶೀರ್ವಾದಿಸುತ್ತಾ ಬಂದಿದ್ದಾರೆ. ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುತ್ತಾ ಬಂದಿದ್ದೇನೆ. ಈ ಭಾಗದ ಶಿಕ್ಷಕರು ಮತ್ತೊಮ್ಮೆ ಆಶೀರ್ವಾದ ಮಾಡಲಿದ್ದಾರೆ ಎನ್ನುವ ಭರವಸೆ ಇದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

**<><*<><>*><>**

ರಾಜ್ಯ ಸರ್ಕಾರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಅತ್ಯಂತ ಕಳಪೆ ಮಟ್ಟದಲ್ಲಿ ನಡೆಸಿದೆ ಎಂದು ಬಿಜೆಪಿಯ ಮಾಜಿ ವಿಧಾನಪರಿಷತ್ ಸದಸ್ಯ ಅರುಣ್ ಶಹಪುರ ಆರೋಪಿಸಿದ್ದಾರೆ. ಬೆಂಗಳೂರಿನ ಬಿಜೆಪಿ ಕಾರ್ಯಾಲಯದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಾಥಮಿಕ ಶಿಕ್ಷಣ ಸಚಿವ ಮಧುಬಂಗಾರಪ್ಪ ತಮ್ಮ ಇಲಾಖೆಯನ್ನು ನಿರ್ವಹಿಸುವಲ್ಲಿ ಸಂಪೂರ್ಣವಾಗಿ ವಿಫಲರಾಗಿದ್ದಾರೆ. ಶೈಕ್ಷಣಿಕ ದುರಾಡಳಿತಕ್ಕೆ ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯೇ ಸಾಕ್ಷಿ. ಇದರಿಂದ ವಿದ್ಯಾರ್ಥಿಗಳ ಭವಿಷ್ಯ ಸಂಕಷ್ಟದಲ್ಲಿದೆ. ಪೋಷಕರು ತಮ್ಮ ಮಕ್ಕಳ ಭವಿಷ್ಯದ ಬಗ್ಗೆ ಚಿಂತಿಸುವಂತಾಗಿದೆ ಎಂದು ದೂರಿದರು. ರಾಜ್ಯ ಸರ್ಕಾರ ಅಧಿಕಾರಕ್ಕೆ ಬರುವಾಗಲೇ ಪಠ್ಯವನ್ನು ಬದಲಾಯಿಸುವ ಸಂಕಲ್ಪ ಮಾಡಿತ್ತು. ಅದರಂತೆ ಪಠ್ಯವನ್ನು ಬದಲಾಯಿಸಿತು. ಆದರೆ ವಿದ್ಯಾರ್ಥಿಗಳಿಗೆ ಸಾಕಷ್ಟು ಪಠ್ಯ ಪುಸ್ತಕಗಳನ್ನು ವಿತರಿಸದೇ ಕೇವಲ ಒಂದು ಶಾಲೆಗೆ ಒಂದು ಪುಸ್ತಕ ನೀಡಿತ್ತು ಎಂದು ಅರುಣ್ ಶಹಪುರ ಆಪಾದಿಸಿದರು.

**<><*<><>*><>**

ಧಾರವಾಡದ ತೋಟಗಾರಿಕೆ ಇಲಾಖೆಯ ಆವರಣದಲ್ಲಿ ಆಯೋಜಿಸಲಾಗಿರುವ ಮಾವು ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಇಂದು ಧಾರವಾಡದ ಮಾವು ಬೆಳೆಗಾರ ಪ್ರಮೋದ ಗಾವ್ಕರ್ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಧಾರವಾಡದಲ್ಲಿ ೨-೩ ವರ್ಷಗಳಿಂದ ಮಾವು ಮೇಳ ಆಯೋಜಿಸಿಲ್ಲ. ಆದರೆ ಈ ವರ್ಷ ಮಾವು ಮೇಳ ಆಯೋಜಿಸಿರುವುದರಿಂದ ಬಹಳ ಖುಷಿಯಾಗಿದೆ. ಪ್ರತಿ ವರ್ಷ ಮೇಳವನ್ನು ಆಯೋಜನೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

**ಧ್ವನಿ : ಪ್ರಮೋದ ಗಾವ್ಕರ್**

ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಕಾಶಿನಾಥ ಭದ್ರಣ್ಣ ಮಾತನಾಡಿ, ಜಿಲ್ಲೆಯಾದ್ಯಂತ ೮ ಸಾವಿರ ಎಕರೆಯಲ್ಲಿ ಮಾವು ಬೆಳೆಯನ್ನು ಬೆಳೆಯಲಾಗುತ್ತಿದೆ. ಸಾರ್ವಜನಿಕರಿಗೆ ಉತ್ತಮ ಗುಣಮಟ್ಟದ ಮಾವು ನೀಡಬೇಕೆನ್ನುವ ಉದ್ದೇಶದಿಂದ ಮಾವು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ತೋಟಗಾರಿಕೆ ಇಲಾಖೆಯಿಂದ ಆಯೋಜಿಸಲಾಗಿದೆ ಎಂದು ಹೇಳಿದರು. ಮಾವು ಮಾರಾಟ ಮೇಳದಲ್ಲಿ ಜಿಲ್ಲೆಯ ವಿವಿಧ ಭಾಗದ ರೈತರು ಸುಮಾರು ೩೦ ಮಳಿಗೆಗಳನ್ನು ಹಾಕಿದ್ದಾರೆ. ಅದರಲ್ಲಿ ಆರ್ಕಾ ಕೇಸರಿ, ಧಾರವಾಡ ರಸಪೂರಿ, ಖಾದರ್, ಕಲ್ಮಿ ಸೇರಿದಂತೆ ವಿವಿಧ ರೀತಿಯ ಮಾವಿನ ತಳಿಗಳನ್ನು ಮಾರಾಟ ಮಾಡಲಾಗುತ್ತಿದೆ. ಸುಮಾರು ೫೨ ವಿವಿಧ ಮಾವಿನ ತಳಿಗಳನ್ನು ಸಾರ್ವಜನಿಕರ ಪ್ರದರ್ಶನಕ್ಕೆ ಇಡಲಾಗಿದೆ ಎಂದು ಮಾಹಿತಿ ನೀಡಿದರು.

**<><*<><>*><>**

ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯದಿಂದ ಒಟ್ಟು ೬ ಸಾವಿರ ಕ್ಯೂಸೆಕ್‌ನಷ್ಟು ನೀರನ್ನು ಕೃಷ್ಣಾ ನದಿಗೆ ಹರಿಸಲಾಯಿತು ಎಂದು ಕೆಬಿಜೆಎನ್‌ಎಲ್ ಅಣೆಕಟ್ಟು ವಿಭಾಗದ ಕಾರ್ಯನಿರ್ವಾಹಕ ಎಂಜಿನಿಯರ್ ಅಶೋಕರೆಡ್ಡಿ ಪಾಟೀಲ್ ಮಾಹಿತಿ ನೀಡಿದ್ದಾರೆ. ಕುಡಿಯುವ ಉದ್ದೇಶಕ್ಕಾಗಿ ಬಸವಸಾಗರ ಜಲಾಶಯದಿಂದ ಒಟ್ಟಾರೆ ೧.೨೫ ಟಿಎಂಸಿ ಅಡಿ ನೀರನ್ನು ಕೃಷ್ಣಾ ನದಿಗೆ ಹರಿಸಲಾಗುತ್ತಿದೆ. ಸದ್ಯ ಬಸವಸಾಗರ ಜಲಾಶಯಕ್ಕೆ ಲಾಲ್‌ಬಹದ್ದೂರ್ ಶಾಸ್ತ್ರೀ ಆಲಮಟ್ಟಿ ಜಲಾಶಯದಿಂದ ೭ ಸಾವಿರ ಕ್ಯೂಸೆಕ್‌ನಷ್ಟು ನೀರಿನ ಒಳಹರಿವು ಇದೆ. ನಾರಾಯಣಪುರ ಎಡದಂಡೆ ಮುಖ್ಯ ಕಾಲುವೆಗೆ ಕಳೆದ ಮೂರು ದಿನಗಳಿಂದ ನಿತ್ಯ ೧ ಸಾವಿರದ ೭೦೦ ಕ್ಯೂಸೆಕ್ ಪ್ರಮಾಣದಲ್ಲಿ ನೀರನ್ನು ಹರಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಸದ್ಯ ಎಲ್ಲೆಡೆ ಬರಗಾಲ ಇರುವುದರಿಂದ

ರೈತರು ಕೃಷಿಗಾಗಿ ನೀರನ್ನು ಬಳಸಬಾರದು. ಕುಡಿಯುವ ಉದ್ದೇಶಕ್ಕೆ ಮಾತ್ರ ಬಳಸಿಕೊಳ್ಳಬೇಕು ಎಂದು ಅಶೋಕರೆಡ್ಡಿ ಪಾಟೀಲ್ ಮನವಿ ಮಾಡಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ,

ದಕ್ಷಿಣ ಒಳನಾಡಿನ ಹಲವು ಕಡೆಗಳಲ್ಲಿ ಹಾಗೂ ಕರಾವಳಿಯ ಮತ್ತು ಉತ್ತರ ಒಳನಾಡಿನ ಹಲವು ಭಾಗಗಳಲ್ಲಿ ಇಂದು ಮಳೆಯಾಗಿದೆ.

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದಲ್ಲಿ ೧೬ ಸೆಂಟಿಮೀಟರ್ ಮಳೆಯಾಗಿದ್ದು, ಮಂಡ್ಯ ನಗರದಲ್ಲಿ ೯ ಸೆಂಟಿ ಮೀಟರ್, ಬೆಳಗಾವಿ ನಿಪ್ಪಾಣಿಯಲ್ಲಿ ೬ ಸೆಂಟಿಮೀಟರ್ ಹಾಗೂ ಮೈಸೂರು ಜಿಲ್ಲೆಯ ನಂಜನಗೂಡು ಮತ್ತು ರಾಮನಗರ ಜಿಲ್ಲೆಯ ಚನ್ನಪಟ್ಟಣದಲ್ಲಿ ತಲಾ ೫ ಸೆಂಟಿ ಮೀಟರ್ ಮಳೆಯಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಬೆಂಗಳೂರು ನಗರ ಜಿಲ್ಲೆಯ, ಹೆಸರಘಟ್ಟ, ರಾಮನಗರ, ಮಾಗಡಿ, ಕೃಷ್ಣರಾಜಪೇಟೆ, ಮದ್ದೂರು, ತಿಪಟೂರು ಮತ್ತು ಚಿಕ್ಕಮಗಳೂರು ಜಿಲ್ಲೆಯ ಯಾಗಟಿಯಲ್ಲಿ ತಲಾ ೪ ಸೆಂಟಿ ಮೀಟರ್ ಮಳೆಯಾಗಿದೆ. ಬೆಂಗಳೂರು ನಗರ, ಚಿಕ್ಕಬಳ್ಳಾಪುರ ಜಿಲ್ಲೆಯ ತೊಂಡೆಬಾವಿ, ಮೈಸೂರು ಜಿಲ್ಲೆಯ ಹುಣಸೂರು, ಚಿಕ್ಕಮಗಳೂರು ಜಿಲ್ಲೆಯ ಅಜ್ಜಂಪುರ, ಸಕಲೇಶಪುರದಲ್ಲಿ ತಲಾ ೩ ಸೆಂಟಿ ಮೀಟರ್ ಮಳೆಯಾಗಿದೆ. ಹಾಸನ ಜಿಲ್ಲೆಯ ಕೊಣನೂರು, ಚಾಮರಾಜ ಜಿಲ್ಲೆಯ ಬೇಗೂರು, ಚಿಕ್ಕಬಳ್ಳಾಪುರ, ಕೃಷ್ಣರಾಜನಗರ, ಕೊಡಗು ಜಿಲ್ಲೆಯ ಹಾರಂಗಿ, ಮೈಸೂರು ಮತ್ತು ಕುಣಿಗಲ್‌ನಲ್ಲಿ ೨ ಸೆಂಟಿಮೀಟರ್ ಮಳೆಯಾಗಿದೆ. ಬೆಂಗಳೂರು ಸುತ್ತಮುತ್ತ ಸಾಧಾರಣ ಮಳೆಯಾಗಿದೆ. ಗರಿಷ್ಠ ೩೨, ಕನಿಷ್ಠ ೨೦ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ

<><*<><>*><>

ಹಾವೇರಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಸಕ್ತ ಸಾಲಿನ ಪ್ರಥಮ ಪಿಯುಸಿ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಸಮನ್ವಯಾಧಿಕಾರಿ ಗುರುಬಸಮ್ಮ ತಿಳಿಸಿದ್ದಾರೆ. ಪ್ರಥಮ ಪಿಯುಸಿ ತರಗತಿಯ ಪಿಸಿಎಂಬಿ ಹಾಗೂ ಪಿಸಿಎಂಸಿ ಗೆ ವಿದ್ಯಾರ್ಥಿಗಳನ್ನು ಮೆರಿಟ್ ಹಾಗೂ ವರ್ಗ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ವಿದ್ಯಾರ್ಥಿಗಳು ಸಮೀಪದ  ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಏಕಲವ್ಯ ಮಾದರಿ, ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಲ್ಲಿ ಪ್ರಥಮ ಪಿಯುಸಿ ತರಗತಿ ದಾಖಲಾತಿಗೆ ಇದೇ ತಿಂಗಳು ೧೭ ರೊಳಗಾಗಿ ಅರ್ಜಿ ಸಲ್ಲಿಸಬಹುದು ಎಂದು ಅವರು ಮಾಹಿತಿ ನೀಡಿದ್ದಾರೆ.

<><*<><>*><>

ಬೆಳೆ ಹಾನಿ ಪರಿಹಾರದ ಅನುದಾನ ಖಾತೆಗೆ ಜಮೆ ಆಗದೇ ಇರುವ ರೈತರು ತಮ್ಮ ತಾಲೂಕಿನ ತಹಸೀಲ್ದಾರ್ ಕಚೇರಿ ಸಂಪರ್ಕಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ತಿಳಿಸಿದ್ದಾರೆ. ಹಲವು ರೈತರ ಖಾತೆಗೆ ಪರಿಹಾರ ಈಗಾಗಲೇ ಜಮೆ ಆಗಿದೆ. ಆದರೆ ವಿವಿಧ ತಾಂತ್ರಿಕ ಕಾರಣಗಳಿಂದ ಜಿಲ್ಲೆಯ ೫ ಸಾವಿರದ ೮೭೪ ರೈತರ ಬ್ಯಾಂಕ್ ಖಾತೆಗೆ ಅನುದಾನ ಜಮೆಯಾಗಿಲ್ಲ.  ಹೀಗಾಗಿ ಜಿಲ್ಲೆಯ ಬರ ಪೀಡಿತ ೧೧ ತಾಲೂಕುಗಳಲ್ಲಿ  ರೈತರ ಸಲಹಾ ಕೇಂದ್ರವನ್ನು ಸ್ಥಾಪಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ರೈತರು ಇದೇ ೧೯ ರೊಳಗೆ ತಮ್ಮ ವ್ಯಾಪ್ತಿಯ ತಹಶೀಲ್ದಾರ ಕಚೇರಿಯ ರೈತರ ಸಲಹಾ ಕೇಂದ್ರವನ್ನು ಸಂಪರ್ಕಸಿ ನ್ಯೂನತೆಗಳನ್ನು ಸರಿಪಡಿಸಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

<><*<><>*><>

ಹಾವೇರಿ ಜಿಲ್ಲೆಯಲ್ಲಿ ಬೇಸಿಗೆ ಹಂಗಾಮಿನ ಬೆಳೆ ಸಮೀಕ್ಷೆ ಮೂಲಕ ಸಂಗ್ರಹಿಸಿದ ಬೆಳೆ ಮಾಹಿತಿ ಕುರಿತು ರೈತರ ಆಕ್ಷೇಪಣೆಗಳನ್ನು ಸಲ್ಲಿಸಲು ರಾಜ್ಯ ಸರ್ಕಾರ ಇದೇ ೧೭ರವರೆಗೆ ಅವಕಾಶ ಕಲ್ಪಿಸಿದೆ ಎಂದು ಹಾವೇರಿ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕ ಮಂಜುನಾಥ ತಿಳಿಸಿದ್ದಾರೆ. ರೈತರು ಬೆಳೆ ಮಾಹಿತಿ, ವಿಸ್ತೀರ್ಣದ ಮಾಹಿತಿ ಕುರಿತು ಬೆಳೆ ದರ್ಶಕ ಮೊಬೈಲ್ ಆಪ್ ಮೂಲಕ ಅಥವಾ ಬೆಳೆ ಸಮೀಕ್ಷೆ ತಂತ್ರಾಂಶದ ಮೂಲಕ ಆಕ್ಷೇಪಣೆ ಸಲ್ಲಿಸಬಹುದು ಎಂದು ಮಾಹಿತಿ ನೀಡಿದರು. ಬೆಳೆ ಸಮೀಕ್ಷೆ ದತ್ತಾಂಶವನ್ನು ಆಧರಿಸಿ, ಮುಂದಿನ ದಿನಗಳಲ್ಲಿ ಬೆಳೆ ವಿಮೆಗೆ ಸಂಬಂಧಿಸಿದ ಪ್ರಕರಣಗಳ ಇತ್ಯರ್ಥ, ಬೆಂಬಲ ಬೆಲೆಯಡಿ ರೈತರು ಮಾರಾಟ ಮಾಡಲು ನೇರ ನಗದು ವರ್ಗಾವಣೆ ಹಾಗೂ ಇತರೆ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ರೈತರು ಸಮರ್ಪಕವಾಗಿ ಬಳಕೆ ಮಾಡಬೇಕು ಎಂದರು. ರೈತರು ಇದರಲ್ಲಿ ಪಾಲ್ಗೊಂಡು ತಾವು ಬೆಳೆದ ಬೆಳೆ ಹಾಗೂ ಬೆಳೆ ಸಮೀಕ್ಷೆಯಲ್ಲಿ ದಾಖಲಾದ ಬೆಳೆಯು, ಒಂದೇ ಇರುವ ಕುರಿತು ಬೆಳೆ ದರ್ಶಕ ಮೊಬೈಲ್ ಆಪ್ ಮೂಲಕ ಖಾತರಿ ಪಡಿಸಿಕೊಳ್ಳಬೇಕು. ಒಂದು ವೇಳೆ ಭಿನ್ನವಾಗಿದ್ದಲ್ಲಿ ಆಕ್ಷೇಪಣೆಗಳನ್ನು ಈ ತಿಂಗಳ ೧೭ ರೊಳಗೆ ಸಲ್ಲಿಸಲು ಅವಕಾಶವಿರುತ್ತದೆ ಎಂದು ಮಂಜುನಾಥ ತಿಳಿಸಿದ್ದಾರೆ.

<><*<><>*><>

೧. ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೊದಲ ರ್‍ಯಾಂಕ್ ಪಡೆದ ಬಾಗಲಕೋಟೆಯ ಅಂಕಿತಾ ಬಸಪ್ಪ ಕೊಣ್ಣೂರ ಮತ್ತು ೩ನೇ ರ್‍ಯಾಂಕ್ ಪಡೆದ ಮಂಡ್ಯದ ನವನೀತ್ ಅವರನ್ನು ಸಮಾಜ ಕಲ್ಯಾಣ ಸಚಿವ ಡಾ. ಎಚ್.ಸಿ. ಮಹದೇವಪ್ಪ ಸನ್ಮಾನಿಸಿದರು. ಇದೇ ವೇಳೆ ಈ ವಿದ್ಯಾರ್ಥಿಗಳಿಗೆ ಮುಂದಿನ ವ್ಯಾಸಂಗಕ್ಕಾಗಿ ಸರ್ಕಾರದ ವತಿಯಿಂದ ಎಲ್ಲ ರೀತಿಯ ನೆರವು ನೀಡಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

೨. ಶಿಕ್ಷಣ ಇಲಾಖೆ ನಿರ್ದೇಶನದಂತೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ-೧ ರಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪರೀಕ್ಷೆ-೨ ಬರೆಯಲು ಅನುವಾಗುವಂತೆ ನಾಳೆಯಿಂದ ಜೂನ್ ೫ ರವರೆಗೂ ಬೆಳಗ್ಗೆ ೧೦ ರಿಂದ ೪.೩೦ ರವರೆಗೂ ರಜಾದಿನಗಳು ಒಳಗೊಂಡಂತೆ ವಿಶೇಷ ತರಗತಿ ನಡೆಸಲಾಗುತ್ತಿದೆ ಎಂದು ಕೋಲಾರ ಡಿಡಿಪಿಐ ಕೃಷ್ಣಮೂರ್ತಿ ತಿಳಿಸಿದ್ದಾರೆ.

೩. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಮುತ್ಯಾಲಮ್ಮ ದೇವಿಯ ರಥೋತ್ಸವ ಹಾಗೂ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು. ಜಾತ್ರಾ ಉತ್ಸವದಲ್ಲಿ ವೀರಗಾಸೆ, ಡೊಳ್ಳು ಕುಣಿತ ಮೊದಲಾದ

ವಿವಿಧ ಕಲಾತಂಡಗಳು ಭಾಗವಹಿಸಿದ್ದವು. ಗ್ರಾಮೀಣ ಭಾಗದ ಮಹಿಳೆಯರು ವಿವಿಧ ರೀತಿಯ ಆರತಿಗಳೊಂದಿಗೆ ಮೆರವಣಿಗೆ ಮೂಲಕ ಆಗಮಿಸಿ, ಪೂಜಾ ಕೈಂಕರ್ಯಗಳನ್ನು ನೆರವೇರಿಸಿದರು.

೪. ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದ ಚಂದ್ರವನದಲ್ಲಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ವತಿಯಿಂದ ಆಯೋಜಿಸಿದ್ದ ಯೋಗೋತ್ಸವಕ್ಕೆ ಜಿಲ್ಲಾಧಿಕಾರಿ ಡಾ.ಕುಮಾರ ಚಾಲನೆ ನೀಡಿದರು.

೫. ಬೆಂಗಳೂರು ಸರ್ಕಾರಿ ಜವಳಿ ತಾಂತ್ರಿಕ ಸಂಸ್ಥೆಯು ಪ್ರಸಕ್ತ ಸಾಲಿನ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಟೆಕ್ಸ್‌ಟೈಲ್ ಟೆಕ್ನಾಲಜಿ ಕೋರ್ಸಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಶ್ರೀಮತಿ ಉಷಾ ಎಸ್. ಪ್ರಾಂಶುಪಾಲರು ಮೊಬೈಲ್ ಸಂಖ್ಯೆ ೯೪೮೧೧-೦೧೧೦೪೯ ಇವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

೬. ಕೊಪ್ಪಳ ಜಿಲ್ಲೆಯಲ್ಲಿ ಮುಂಗಾರು ಆರಂಭವಾಗುತ್ತಿದ್ದು, ಮುನ್ನೆಚ್ಚರಿಕಾ ಕ್ರಮವಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ನಳಿನ್ ಅತುಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

**<><*<><>*><>**

ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿಂದು ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯುವ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಲಖನೌ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ.
ಪಂದ್ಯ ಇಂದು ಸಂಜೆ ೭.೩೦ಕ್ಕೆ ಆರಂಭವಾಗಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**